## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು ಇವರಿಗೆ ಸಂಚಿತ ಸಂಭಾವನೆಯನ್ನು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 165 ವಿಸೇಬಿ 2012 ದಿನಾಂಕ: 10-03-2015.
2. ವಿಚಾರಣಾಧಿಕಾರಿಯವರ ವರದಿ ದಿನಾಂಕ.21-07-2015.

------

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಶ್ರೀ ಎಂ.ವೆಂಕಟೇಶಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಾಂಡವಪುರ, ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದಾರೆ ಎನ್ನಲಾದ ಕರ್ತವ್ಯಲೋಪ/ದುರ್ನಡತೆ ಆರೋಪಗಳ ಕುರಿತಂತೆ ಸದರಿ ಅಧಿಕಾರಿ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿಯಾಗಿ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ನೇಮಿಸಲಾಗಿತ್ತು. ಸದರಿಯವರು ಪ್ರಕರಣದ ಇಲಾಖಾ ವಿಚಾರಣೆಯನ್ನು ನಡೆಸಿ, ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿ: 21-07-2015 ರ ಪತ್ರದೊಂದಿಗೆ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಗಳಿಗೆ ಅವರ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 165 ವಿಸೇಬಿ 2012 ಬೆಂಗಳೂರು ದಿನಾಂಕ:12-08-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು ಇವರಿಗೆ ಸರ್ಕಾರಿ ಆದೇಶ ಸಂ: ಸಿಆಸುಇ 6 ಸೇಇವಿ 2010 ದಿನಾಂಕ:28-04-2011ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 15,000/- (ಹದಿನೈದು ಸಾವಿರ ರೂಪಾಯಿಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ ಇವರು ಶ್ರೀ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸದರಿ ಮೊತ್ತವನ್ನು ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ
3. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ. 1242, 4ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-40.

ಪ್ರತಿಯನ್ನು:-

3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
4. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.